# ಕರ್ನಾಟಕ ವಿಧಾನ ಪರಿಷತ್ತು
# 154ನೇ ಅಧಿವೇಶನ
# ಸಂತಾಪ ಸೂಚನೆ

**ಮಾನ್ಯ ಸಭಾಪತಿಯವರು:-**

**ಪದ್ಮ ವಿಭೂಷಣ ಪುರಸ್ಕೃತ ರಾಜ್ಯದ ಮಾಜಿ ಮುಖ್ಯಮಂತ್ರಿ ಹಾಗೂ ಕೇಂದ್ರ ಸರ್ಕಾರದ ಮಾಜಿ ವಿದೇಶಾಂಗ ಸಚಿವರಾಗಿದ್ದ ಎಸ್.ಎಂ. ಕೃಷ್ಣ ಅವರು ನಿಧನರಾದುದನ್ನು ಈ ಸದನಕ್ಕೆ ತಿಳಿಸಲು ವಿಷಾಧಿಸುತ್ತೇನೆ.**

## ಸೋಮನಹಳ್ಳಿ ಮಲ್ಲಯ್ಯ ಕೃಷ್ಣ

ಪದ್ಮ ವಿಭೂಷಣ ಪುರಸ್ಕೃತ ರಾಜ್ಯದ ಮಾಜಿ ಮುಖ್ಯಮಂತ್ರಿ ಹಾಗೂ ಕೇಂದ್ರ ಸರ್ಕಾರದ ಮಾಜಿ ವಿದೇಶಾಂಗ ಸಚಿವರಾಗಿದ್ದ ಎಸ್.ಎಂ. ಕೃಷ್ಣ ಅವರು ದಿನಾಂಕ:10.12.2024 ರಂದು ನಿಧನ ಹೊಂದಿರುತ್ತಾರೆ.

1932ರ ಮೇ 01 ರಂದು ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕಿನ ಸೋಮನಹಳ್ಳಿಯಲ್ಲಿ ಜನಿಸಿದ್ದ ಶ್ರೀಯುತರು ಮೈಸೂರಿನ ರಾಮಕೃಷ್ಣ ವಿದ್ಯಾಶಾಲೆಯಲ್ಲಿ ಪ್ರೌಢ ಶಿಕ್ಷಣ, ಮೈಸೂರಿನ ಮಹಾರಾಜ ಕಾಲೇಜಿನಿಂದ ಬಿ.ಎ. ಪದವಿ, ಬೆಂಗಳೂರು ಸರ್ಕಾರಿ ಕಾನೂನು ಕಾಲೇಜಿನಿಂದ, ಟೆಕ್ಸಾಸ್‌ನ ಸದರನ್ ಮೆಥೋಡಿಸ್ಟ್ ವಿಶ್ವವಿದ್ಯಾಲಯ ಹಾಗೂ ಜಾರ್ಜ್ ವಾಶಿಂಗ್‌ಟನ್‌ನ ಲಾ ಕಾಲೇಜಿನಿಂದ ಕಾನೂನು ಪದವಿಯನ್ನು ಹೊಂದಿದ್ದ ಶ್ರೀಯುತರು ಬೆಂಗಳೂರಿನ ರೇಣುಕಾಚಾರ್ಯ ಕಾನೂನು ಕಾಲೇಜಿನಲ್ಲಿ ಅಂತರಾಷ್ಟ್ರೀಯ ನ್ಯಾಯ ಶಾಸ್ತ್ರದ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ್ದರು.

1962ರಲ್ಲಿ ಮದ್ದೂರು ವಿಧಾನಸಭಾ ಕ್ಷೇತ್ರದಿಂದ ಸ್ವತಂತ್ರ ಅಭ್ಯರ್ಥಿಯಾಗಿ ಆಯ್ಕೆಯಾಗುವ ಮೂಲಕ ತಮ್ಮ ರಾಜಕೀಯ ಜೀವನವನ್ನು ಪ್ರಾರಂಭಿಸಿದ ಶ್ರೀಯುತರು 4,5 ಮತ್ತು 7ನೇ ಲೋಕಸಭೆಯ ಸದಸ್ಯರಾಗಿ, 1972-77ರವರೆಗೆ ವಿಧಾನ ಪರಿಷತ್ತಿನ ಸದಸ್ಯರಾಗಿ, 1996-1999ರವರೆಗೆ ರಾಜ್ಯಸಭಾ ಸದಸ್ಯರಾಗಿ ಸೇವೆ ಸಲ್ಲಿಸಿದ್ದರು. ಶ್ರೀಯುತರು 1989-1993ರ ಅವಧಿಯಲ್ಲಿ ವಿಧಾನ ಸಭೆಯ ಸಭಾಧ್ಯಕ್ಷರಾಗಿ, 1993-1994ರಲ್ಲಿ ಮೊದಲ ಉಪ ಮುಖ್ಯಮಂತ್ರಿಯಾಗಿ, 1999-2004ರವರೆಗೆ ಕರ್ನಾಟಕ ರಾಜ್ಯದ ಮುಖ್ಯ ಮಂತ್ರಿಯಾಗಿ, 2004 ರಿಂದ 2008ರವರೆಗೆ ಮಹಾರಾಷ್ಟ್ರದ ರಾಜ್ಯಪಾಲರಾಗಿ ಕಾರ್ಯನಿರ್ವಹಿಸಿದ್ದರು.

ಕೇಂದ್ರ ಸರ್ಕಾರದಲ್ಲಿ ವಾಣಿಜ್ಯ ಕೈಗಾರಿಕೆಗಳು ಮತ್ತು ಸಂಸದೀಯ ವ್ಯವಹಾರಗಳ ಸಚಿವರಾಗಿ, ಹಣಕಾಸು ಖಾತೆ ರಾಜ್ಯ ಸಚಿವರಾಗಿ ಹಾಗೂ ವಿದೇಶಾಂಗ ವ್ಯವಹಾರಗಳ ಸಚಿವರಾಗಿ ವಿವಿಧ ಹುದ್ದೆಗಳಲ್ಲಿ ಸ್ಮರಣೀಯವಾಗಿ ಜನ ಸೇವೆಯನ್ನು ಸಲ್ಲಿಸಿರುತ್ತಾರೆ. ವಿಶ್ವಭೂಪಟದಲ್ಲಿ ಬೆಂಗಳೂರು ನಗರದ ಚಿತ್ರಣ ಬದಲಿಸಿ ಬೆಂಗಳೂರನ್ನು "ಸಿಲಿಕಾನ್ ಸಿಟಿ"ಯಾಗಿ ಪರಿವರ್ತಿಸಿದ ಹರಿಕಾರರಾಗಿದ್ದ ಶ್ರೀಯುತರು ಕರ್ನಾಟಕಕ್ಕೆ ಜಾಗತಿಕ ಮಟ್ಟದಲ್ಲಿ ಹೆಸರನ್ನು ತಂದವರು. ತಾಲ್ಲೂಕು ಮಟ್ಟದಲ್ಲಿ "ಭೂಮಿ" ತಂತ್ರಜ್ಞಾನವನ್ನು ಜಾರಿಗೆ ತರುವ ಮೂಲಕ ಡಿಜಿಟಲೀಕರಣಕ್ಕೆ ನಾಂದಿ ಹಾಡಿದ ಕೀರ್ತಿಗೆ ಭಾಜನರಾಗಿದ್ದಾರೆ.

ಶ್ರೀಯುತರ ದೂರದರ್ಶಿತ್ವ, ಶಿಸ್ತುಬದ್ಧ ಜೀವನ, ಸಜ್ಜನಿಕೆಯ ನಡವಳಿಕೆ, ಅಧ್ಯಯನಶೀಲ ಪ್ರವೃತ್ತಿ ಹಾಗೂ ವ್ಯಕ್ತಿತ್ವವು ಉದಯೋನ್ಮುಖ ರಾಜಕಾರಣಿಗಳಿಗೆ ಸ್ಫೂರ್ತಿದಾಯಕವಾಗಿದೆ. ಶ್ರೀಯುತರು ರಾಷ್ಟ್ರ ಮತ್ತು ರಾಜ್ಯಕ್ಕೆ ನೀಡಿದ ಅಮೂಲ್ಯ ಕೊಡುಗೆಗಾಗಿ ಪದ್ಮವಿಭೂಷಣ ಪ್ರಶಸ್ತಿಗೆ ಭಾಜನರಾಗಿರುತ್ತಾರೆ.

ಮಿತಭಾಷಿ, ಸೌಮ್ಯ ರಾಜಕಾರಣಿ ಹಾಗೂ ಅಜಾತಶತ್ರುಗಳಾಗಿದ್ದ ಶ್ರೀಯುತರ ನಿಧನದಿಂದಾಗಿ ರಾಷ್ಟ್ರ ಹಾಗೂ ರಾಜ್ಯವು ಒಬ್ಬ ಶ್ರೇಷ್ಠ ರಾಜಕೀಯ ಮುತ್ಸದ್ದಿಯನ್ನು ಕಳೆದುಕೊಂಡಂತಾಗಿದೆ.

**ಸಭಾನಾಯಕರು ಮತ್ತು ವಿರೋಧ ಪಕ್ಷದ ನಾಯಕರು ಮಾತನಾಡಿದ ನಂತರ:-**

ಮೃತರ ಆತ್ಮಕ್ಕೆ ಸದ್ಗತಿಯನ್ನು ಕೋರುತ್ತಾ, ಅವರ ಅಗಲಿಕೆಯ ನೋವನ್ನು ಸಹಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗಕ್ಕೆ ಪರಮಾತ್ಮನು ಕರುಣಿಸಲೆಂದು ಪ್ರಾರ್ಥಿಸುತ್ತೇನೆ.

ಮೃತರ ಗೌರವಾರ್ಥ ಮಾನ್ಯ ಸದಸ್ಯರುಗಳು ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ಕೇಳಿಕೊಳ್ಳುತ್ತೇನೆ.

**(ಮೌನ ಆಚರಿಸಿದ ನಂತರ)**

ಸದನದಲ್ಲಿ ಪ್ರಸ್ತಾಪಿಸಿದ ಸಂತಾಪ ಸೂಚನೆಯ ನಿರ್ಣಯವನ್ನು ಮೃತ ಗಣ್ಯರ ಕುಟುಂಬ ವರ್ಗದವರಿಗೆ ಕಳುಹಿಸಲಾಗುವುದು.